ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) ಬಂದಿದೆ.

ಆ) ಸ್ಕೂಲ್ ಮ್ಯಾಪ್ ಆಧಾರದ ಮೇಲೆ ಪರಿಶೀಲಿಸಲಾಗುವುದು.

ಸಂತಾನ ನಿರೋಧ ಶಸ್ತ್ರಚಿಕಿತ್ಸೆಗೆ ಪ್ರೋತ್ಸಾಹಧನ.

382 - ಶ್ರೀಮತಿ ಜ್ಯೋತಿರೆಡ್ಡಿ (ಗೌರಿಬಿದನೂರು) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಂತಾನ ನಿರೋಧ ಶಸ್ತ್ರ ಚಿಕಿತ್ಸೆಗೆ ಒಳಪಟ್ಟಿರುವವರಿಗೆ ಸರ್ಕಾರದಿಂದ ಕೊಡುವ ಸಹಾಯ ಧನ ಎಷ್ಟು

ಆ) ಇದರಲ್ಲಿ ಔಷಧಿಗಳಿಗೆ ಖರ್ಚಾಗುವ ಮೊಬಲಗು ಎಷ್ಟು

ಇ) ಶಸ್ತ್ರಚಿಕಿತ್ಸೆಗೆ ಉಪಯೋಗಿಸುವ ದಾರ ಸರ್ಕಾರದಿಂದ ಒದಗಿಸಲಾಗುವುದೇ?

ಡಾ: ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಪುರುಷ ಸಂತಾನ ಹರಣ ಶಸ್ತ್ರ ಚಿಕಿತ್ಸೆಗೆ ರೂ. 130 ಹಾಗೂ ಮಹಿಳಾ ಸಂತಾನ ಹರಣ ಶಸ್ತ್ರ ಚಿಕಿತ್ಸೆಗೂ ರೂ. 200ನ್ನು ಸರ್ಕಾರ ನೀಡುತ್ತದೆ.

ಆ) ಔಷಧಿಗೆಂದು ಪುರುಷ ಸಂತಾನ ಹರಣ ಶಸ್ತ್ರ ಚಿಕಿತ್ಸೆಗೆ ರೂ. 15.00 ಹಾಗೂ ಮಹಿಳಾ ಸಂತಾನ ಹರಣ ಶಸ್ತ್ರ ಚಿಕಿತ್ಸೆಗೆ ರೂ. 25.00 ಖರ್ಚಾಗುವುದು.

ಇ) ಹೌದು.

ಮೂಡಲಗಿ ಹಾಗು ಕುಲಗೋಡ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಕುರಿತು.

384 - ಶ್ರೀ ವಿ.ಎಸ್. ಕೌಜಲಗಿ (ಅರಭಾವಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗೋಕಾಕ ತಾಲ್ಲೂಕಿನ ಮೂಡಲಗಿ ಹಾಗೂ ಕುಲಗೋಡ ಗ್ರಾಮಗಳಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಕ್ರಮವಾಗಿ 50 ಹಾಗೂ 30 ಹಾಸಿಗೆಗಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳಾವುವು?

ಆ) ಹಾಗಿದ್ದಲ್ಲಿ ಸದರಿ ಕಾಮಗಾರಿಗೆ ತಗಲುವ ವೆಚ್ಚವೆಷ್ಟು?

ಶ್ರೀ ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಸದ್ಯಕ್ಕಿಲ್ಲ.

ಆ) ಉದ್ಭವಿಸುವುದಿಲ್ಲ.